ನಗರ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆ ಉದ್ಯಮಗಳ ಸ್ಥಾಪನೆ

2784 (3409) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಣ್ಣ ಪ್ರಮಾಣದ ಕೈಗಾರಿಕಾಗಳು ಬೆಂಗಳೂರು ಬಿಟ್ಟು ಬೇರೆ ನಗರ ಪ್ರದೇಶ (ತಾಲ್ಲೂಕು ಕೇಂದ್ರದಲ್ಲಿ ಬೆಳೆಯುವಂತೆ ಮಾಡಲು ಸರ್ಕಾರದವರು ಯಾವುದಾದರೂ ವಿಶೇಷ ಕಾರ್ಯಕ್ರಮ ಹಾಕಿಕೊಂಡಿದ್ದಾರೆಯೇ ?

ಆ) ಹಾಗಿದ್ದಲ್ಲಿ ಯಾವ ಕಾರ್ಯಕ್ರಮವನ್ನು ಹಾಕಿಕೊಳ್ಳಲಾಗಿದೆ ?

ಶ್ರೀ ಎಸ್. ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಹೌದು.

ಆ) 1996-2001ರ ಪ್ರಕಾರ ಕೈಗಾರಿಕಾ ನೀತಿಯಲ್ಲಿ ಬೆಂಗಳೂರು ನಗರವನ್ನು ಈಗಾಗಲೇ ಅಭಿವೃದ್ಧಿ ಹೊಂದಿದ ಪ್ರದೇಶವೆಂದು ಪರಿಗಣಿಸಲಾಗಿದೆ. ಬೆಂಗಳೂರು ನಗರ ಜಿಲ್ಲೆಯನ್ನು ಹೊರತುಪಡಿಸಿ, ಉಳಿದ ಎಲ್ಲಾ ಜಿಲ್ಲೆಗಳ 173 (ವಲಯ-2) ತಾಲ್ಲೂಕುಗಳನ್ನು ಅಭಿವೃದ್ಧಿ ಹೊಂದುತ್ತಿರುವ ಪ್ರದೇಶಗಳೆಂದು ಪರಿಗಣಿಸಿ ರಿಯಾಯಿತಿ ಮತ್ತು ಸೌಲಭ್ಯಗಳನ್ನು ನೀಡಲಾಗುತ್ತಿದೆ.

ಇದಲ್ಲದೆ, ಬಿಜಾಪುರ, ಬಳ್ಳಾರಿ, ಮಾಲೂರು, ಕೋಲಾರ ಜಿಲ್ಲೆ, ನಿಪ್ಪಾಣಿ, ಗದಗ, ಚಿಕ್ಕಮಗಳೂರು, ಚಿತ್ರದುರ್ಗಗಳಲ್ಲಿ ಕಿರು ವಿಕಾಸ ಕೇಂದ್ರ (ಮಿನಿ ಗ್ರೋತ್ ಸೆಂಟರ್)ಗಳನ್ನು ಸ್ಥಾಪಿಸಿ ಅಲ್ಲಿ ವಲಯ 3ರ ಅಡಿಯಲ್ಲಿ ವಿಶೇಷ ರಿಯಾಯಿತಿಗಳನ್ನು ನೀಡಲು ಕೈಗಾರಿಕಾ ನೀತಿಯಲ್ಲಿ ಅವಕಾಶ ಮಾಡಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಹೆಚ್ಚು ಕೈಗಾರಿಕೆಗಳು ಸ್ಥಾಪನೆ ಮಾಡುವ ದೃಷ್ಟಿಯಿಂದ ಕೈಗಾರಿಕಾ ವಿಚಾರ ಸಂಕಿರಣಗಳನ್ನು ಹಾಗೂ ಸಾಂಭವ್ಯ ಸಮೀಕ್ಷೆ ನಡೆಸಲಾಗುತ್ತಿದೆ. ಪ್ರತಿ ತಾಲ್ಲೂಕಿನಲ್ಲಿ ದೊರೆಯುವ ಮಾನವ ಸಂಪನ್ಮೂಲ ಹಾಗೂ ನೈಸರ್ಗಿಕ ಸಂಪನ್ಮೂಲ ಹಾಗೂ ಸ್ಥಾಪಿಸಬಹುದಾದ ಕೈಗಾರಿಕೆಗಳ ವಿವರವುಳ್ಳ ಒಂದು ಪುಸ್ತಕವನ್ನು ಸಮೀಕ್ಷೆ ಮಾಡಿ ಹೊರ ತರಲಾಗುತ್ತಿದೆ. ಈಗಾಗಲೇ ಸಾಕಷ್ಟು ತಾಲ್ಲೂಕುಗಳ ಪುಸ್ತಕಗಳನ್ನು ಪ್ರಕಟಿಸಿ ಎಲ್ಲಾ ಬ್ಯಾಂಕುಗಳಿಗೆ, ಅಭಿವೃದ್ಧಿ ಇಲಾಖೆಗಳಿಗೆ, ಉದ್ದಿಮೆದಾರರಿಗೆ ಹಂಚಲಾಗುತ್ತಿದೆ. ಈ ರೀತಿ ಗುರುತಿಸಿದ ಕೈಗಾರಿಕೆಗಳ ಯೋಜನಾ ವರದಿ ತಯಾರಿಸಿ ಉದ್ದಿಮೆದಾರರಿಗೆ ನೀಡಲಾಗುತ್ತಿದೆ.

ಕೈಗಾರಿಕಾ ಸ್ಥಾಪನೆಗಳ ಬಗ್ಗೆ ವಿವರ ನೀಡಲು ಪ್ರತಿ ತಾಲ್ಲೂಕಿನಲ್ಲಿ ಕೈಗಾರಿಕೆ ವಿಚಾರ ಸಂಕಿರಣಗಳನ್ನು ನಡೆಸಲಾಗುತ್ತಿದೆ. ಮತ್ತು ಕೆಲವು ತಾಲ್ಲೂಕುಗಳಲ್ಲಿ ಜಾಥಾ ನಡೆಸಲಾಗುತ್ತಿದೆ. ಬಹಳಷ್ಟು ತಾಲ್ಲೂಕುಗಳಲ್ಲಿ ಕೈಗಾರಿಕಾ ಪ್ರದೇಶ ಅಥವಾ ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಲಾಗಿದೆ. ಹೆಚ್ಚು ಹೆಚ್ಚು ಕೈಗಾರಿಕೆಗಳು ತಾಲ್ಲೂಕು ಮಟ್ಟದಲ್ಲಿ ಸ್ಥಾಪಿಸುವ ದಿಸೆಯಿಂದ ಕೆ.ಎಸ್.ಎಫ್.ಸಿ. ಬ್ಯಾಂಕುಗಳು ಕೆ.ವಿ.ಐ.ಬಿ. ಹಾಗೂ ಇತರ ಹಣಕಾಸು ಸಂಸ್ಥೆಗಳಿಂದ ವಿವಿಧ ಯೋಜನೆಗಳಲ್ಲಿ ಸಾಲದ ವ್ಯವಸ್ಥೆ ಮಾಡಲಾಗುತ್ತಿದೆ.

ಬೈಲಹೊಂಗಲ ನಗರದಲ್ಲಿ ಕೊಳವೆ ಬಾವಿ ತೋಡಿಸುವುದು

2785 (2410) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?